**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 49/2024**

**ಚಾ.ಸಾ. :- 03**
**ಪ್ರಾ.ಸಾ. :- 04**

| | | |
|---|---|---|
| ಹೆಸರು | : | ವಿಜಯಕುಮಾರ್ |
| ತಂದೆಯ ಹೆಸರು | : | ಲೇಟ್ ಕೃಷ್ಣೇಗೌಡ |
| ವಯಸ್ಸು | : | 33 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ವಡ್ಡರಹಳ್ಳಿ ಗ್ರಾಮ, ಪಾಂಡವಪುರ. |

**ಪ್ರಮಾಣೀಕರಿಸಲಾದ ದಿನಾಂಕಃ- 23.03.2026.**

**<u>ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :</u>**

ಮೃತ ಕಾಳೇಗೌಡರು ನಮ್ಮ ಊರಿನವರು. ಈಗ ನೋಡುತ್ತಿರುವ ದಾಖಲೆಯಲ್ಲಿರುವ ಸಹಿ ನನ್ನದು. ಸಾಕ್ಷಿಯ ಸಹಿ ಇರುವ ದಾಖಲೆಯು ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಸಿ) ಎಂದು ಗುರುತಿಸಲಾಯಿತು. ರಸ್ತೆ ಅಪಘಾತಕ್ಕೆ ಸಂಬಂಧಿಸಿದಂತೆ ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆ. ಸದರಿ ಸಹಿಯನ್ನು ನಾನು ಅಪಘಾತ ಸ್ಥಳದ ಬಳಿ ಮಾಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮ ಮೃತರ ಶವಪಂಚನಾಮೆಯನ್ನು ಮಾಡಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಮೃತ ಕಾಳೇಗೌಡರು ನಮ್ಮ ಸಂಬಂಧಿಕರು ಎಂದರೆ ಸುಳ್ಳು. ನನ್ನ ಮುಂದೆ ಪೊಲೀಸರು ಬರವಣಿಗೆ ಮಾಡಿರುವುದಿಲ್ಲ ಹಾಗೂ ಪೊಲೀಸರು ಹೇಳಿದ ಕಾರಣ ನಾನು ಮಹಜರ್ ಗೆ ಸಹಿ ಮಾಡಿರುತ್ತೇನೆ ಎಂದರೆ ಸರಿ.

**<u>ಮರು ವಿಚಾರಣೆ :- ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**